# ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ,

## ಟಿ. ನರಸೀಪುರ.

## ಸಿ. ಸಿ ನಂ. 55/2023

ಪಿರ್ಯಾದಿದಾರರು : ಸರ್ಕಾರ ಪರವಾಗಿ ಬನ್ನೂರು ಪೊಲೀಸ್ ಠಾಣೆ

ವಿರುದ್ಧ

ಆರೋಪಿತರು : ರಾಮಚಂದ್ರ ಬಿನ್ ಪಟೇಲ್ ಸಿದ್ದೇಗೌಡ, 48 ವರ್ಷ,
ವಾಸಃ ಮಾಕನಹಳ್ಳಿ ಗ್ರಾಮ, ಬನ್ನೂರು ಹೋಬಳಿ,
ಟಿ.ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ.

## ದೋಷಾರೋಪಣೆ

**ಶ್ರೀ ಸಚಿನ್ ಹೆಚ್.ಆರ್, ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಟಿ.ನರಸೀಪುರ, ಆದ ನಾನು ಮೇಲ್ಕಂಡ ಆರೋಪಿಯಾದ ನಿಮ್ಮ ಮೇಲೆ ಕೆಳಕಂಡಂತೆ ದೋಷಾರೋಪಣೆಯನ್ನು ಮಾಡುತ್ತೇನೆ.**

ನಿಮ್ಮ ಮೇಲೆ ಹೊರಿಸಲಾದ ದೋಷಾರೋಪಣೆ ಏನೆಂದರೆ

ದಿನಾಂಕ 11.10.2022 ರಂದು ಸಮಯ ಸಂಜೆ 5.00 ಗಂಟೆಗೆ ಬನ್ನೂರು ಪೋಲೀಸ್ ಠಾಣಾ ವ್ಯಾಪ್ತಿಯ ಮಾಹನಹಳ್ಳಿ ಗ್ರಾಮದ ಕೆಂಪೇಗೌಡರವರ ಪ್ಲೋರ್ ಮಿಲ್ ನ ಮುಂಭಾಗದಲ್ಲಿ ಚಾಸಾ-2 ಹುನುಮಂತೇಗೌಡರವರು ನಿಂತಿದ್ದಾಗ ಆರೋಪಿಯಾದ ನೀವು ಅಲ್ಲಿಗೆ ಬಂದು ನಮ್ಮ ಮನೆಯ ಪಕ್ಕದಲ್ಲಿದ್ದೆ ಸೀಬೆ ಗಿಡವನ್ನು ಏಕೆ ಕಟ್ ಮಾಡಿದ್ದೀಯ ಎಂದು ತೀಟೆ ಜಗಳ ತೆಗೆದು ಚಾಸಾ-2 ರವರನ್ನು ತಬ್ಬಿ ಹಿಡಿದು ಅಕ್ರಮ ತಡೆ ಉಂಟು ಮಾಡಿದ್ದು, ಆ ಮೂಲಕ ಆರೋಪಿಯಾದ ನೀವು ಭಾರತೀಯ ದಂಡ ಸಂಹಿತೆ ಕಲಂ.341 ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಎರಡನೇಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ಆರೋಪಿಯಾದ ನೀವು ಚಾಸಾ-2 ರವರಿಗೆ ಕೈಗಳಿಂದ ಮೈಕೈಗೆ ಹೊಡೆದು ಗುದ್ದಿ ಸಾಮಾನ್ಯ ಸ್ವರೂಪದ ಗಾಯವಾಗಿದ್ದು, ಆ ಮೂಲಕ ಆರೋಪಿಯಾದ ನೀವು ಭಾರತೀಯ ದಂಡ ಸಂಹಿತೆ ಕಲಂ.323 ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಮೂರನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ಆರೋಪಿಯಾದ ನೀವು ಚಾಸಾ-2 ರವರಿಗೆ ಬೋಳಿ ಮಗನೆ, ಸೂಳೆ ಮಗನೆ ಎಂದು ಅವಾಚ್ಯ ಶಬ್ದಗಳಿಂದ ನಿಂದಿಸಿದ್ದು, ಆ ಮೂಲಕ ಆರೋಪಿಯಾದ ನೀವು ಭಾರತೀಯ ದಂಡ ಸಂಹಿತೆ ಕಲಂ.504 ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಕೊನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ಆರೋಪಿಯಾದ ನೀವು ಚಾಸಾ-2 ರವರಿಗೆ ಈ ದಿನ ಬಚಾವಾಗಿದ್ದೀಯ ನಿನ್ನನ್ನು ಕೊಲೆ ಮಾಡದೆ ಬಿಡುವುದಿಲ್ಲ ಎಂದು ಕೊಲೆ ಬೆದರಿಕೆ ಹಾಕಿದ್ದು, ಆ ಮೂಲಕ ಆರೋಪಿಯಾದ ನೀವು ಭಾರತೀಯ ದಂಡ ಸಂಹಿತೆ ಕಲಂ.506 ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಮೇಲೆ ಹೇಳಿದ ಅಪರಾಧಗಳಿಗಾಗಿ ನೀವು ಈ ನ್ಯಾಯಾಲಯದಲ್ಲಿ ವಿಚಾರಣೆಗೆ ಒಳಪಡತಕ್ಕದ್ದು.

ದಿನಾಂಕಃ **04.05.2026.**

**(ಸಚಿನ್ ಹೆಚ್.ಆರ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ.**
**ಟಿ. ನರಸೀಪುರ.**

## <u>ಆರೋಪಿತರ ಹೇಳಿಕೆ</u>

ಪ್ರಶ್ನೆ- 1 ಈಗ ಓದಿ ಹೇಳಿದ ಆರೋಪಣೆಯನ್ನು ಅರ್ಥ ಮಾಡಿಕೊಂಡಿರಾ ?

ಉತ್ತರಃ

ಪ್ರಶ್ನೆ-2 ಮೇಲೆ ಹೇಳಿದ ಆರೋಪಣೆಯನ್ನು ಒಪ್ಪಿಕ್ಕೊಳ್ಳುವಿರಾ ? ಅಥವಾ ವಿಚಾರಣೆ ಆಗಬೇಕೆನ್ನುವಿರಾ?
ಉತ್ತರಃ

**(ಮೇಲ್ಕಂಡ ಆರೋಪಣೆಯನ್ನು ಆರೋಪಿತರಿಗೆ ತಿಳಿದ ಭಾಷೆಯಲ್ಲಿ ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಬರೆದು ಕೊಂಡಿದ್ದು ಅವು ಸರಿಯಾಗಿರುತ್ತದೆ ಎಂದು ಈ ಮೂಲಕ ದೃಢೀಕರಿಸುತ್ತೇನೆ.)**

**(ಸಚಿನ್ ಹೆಚ್.ಆರ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ. ಎಫ್.ಸಿ., ಟಿ.ನರಸೀಪುರ.**

**<u>ಆರೋಪಿ ಸಹಿ</u>**